ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉನಿ : ಸುಮಪ : 2018–19 : ದಿನಾಂಕ : 10–10–2018

# ಪತ್ರಿಕಾ ಆಮಂತ್ರಣ

1. ವಿಧಾನ ಪರಿಷತ್ತಿಗೆ ನೂತನವಾಗಿ ಚುನಾಯಿತ ಸದಸ್ಯರಾದ ಹೆಚ್. ಎಂ. ರಮೇಶ ಗೌಡ ಅವರ ಪ್ರಮಾಣ ವಚನ ಸ್ವೀಕಾರ ಸಮಾರಂಭ:

   ದಿನಾಂಕ: 11–10–2018 ಗುರುವಾರ, ಸಮಯ: ಬೆಳಿಗ್ಗೆ 10.30 ಗಂಟೆಗೆ
   ಸ್ಥಳ: ಕೊಠಡಿ ಸಂಖ್ಯೆ 106, ಮೊದಲನೇ ಮಹಡಿ, ವಿಧಾನಸೌಧ, ಬೆಂಗಳೂರು.

2. ವಿಧಾನ ಪರಿಷತ್ತಿಗೆ ನೂತನವಾಗಿ ಚುನಾಯಿತ ಸದಸ್ಯರಾದ ಎಂ.ಸಿ. ವೇಣುಗೋಪಾಲ್ ಅವರ ಪ್ರಮಾಣ ವಚನ ಸ್ವೀಕಾರ ಸಮಾರಂಭ:

   ದಿನಾಂಕ: 11–10–2018 ಗುರುವಾರ, ಸಮಯ: ಬೆಳಿಗ್ಗೆ 11.00 ಗಂಟೆಗೆ
   ಸ್ಥಳ: ಕೊಠಡಿ ಸಂಖ್ಯೆ 106, ಮೊದಲನೇ ಮಹಡಿ, ವಿಧಾನಸೌಧ, ಬೆಂಗಳೂರು.

3. **Rajiv Gandhi Institute of Pertoleum Technology's M.Tech Programme Inauguration:**

   **Dr. M. Veerappa Moily, Member of Parliament,**

   **N.H. Shiva Shankar Reddy,**
   **Minister for Agriculture, Govt. of Karnataka**

**Date: 11-10-2018 Thursday Time: 11-00 a.m.**
**Venue: VTU P.G. Campus, Muddenahalli,**
**Chickballapur District.**

**Note:**
**Transport arranged from Vartha Soudha, Infantry Road Bengaluru at 9.00 A.M.**
**Contact Person : Sri Lakshmi Narayanappa 9448658185**

# ಪತ್ರಿಕಾ ಪ್ರಕಟಣೆ

**ಸಂಖ್ಯೆ:1118/1228**

## ನಿರುದ್ಯೋಗ ಪದವೀಧರರಿಗೆ ಸ್ವಯಂ ಉದ್ಯೋಗ ಸಾಲ

ಬೆಂಗಳೂರು, ಅಕ್ಟೋಬರ್ 10, (ಕರ್ನಾಟಕ ವಾರ್ತೆ)

ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಬೆಂಗಳೂರು ದಕ್ಷಿಣ ಜಿಲ್ಲಾ ವ್ಯಾಪ್ತಿಯಲ್ಲಿ ವಾಸವಿರುವ 2018-19ನೇ ಸಾಲಿಗೆ ಹಿಂದುಳಿದ ವರ್ಗಗಳ ನಿರುದ್ಯೋಗ ಪದವೀಧರರಿಗೆ ಸ್ವಯಂ ಉದ್ಯೋಗ ಸಾಲ ಸೌಲಭ್ಯವನ್ನು ವಾರ್ಷಿಕ ಶೇ. 6 ರ ಬಡ್ಡಿದಲ್ಲಿ ಗರಿಷ್ಠ ರೂ. 10.00 ಲಕ್ಷಗಳ ವರೆಗೆ ಸಾಲ ಒದಗಿಸಲಾಗುತ್ತದೆ.

ಈ ಯೋಜನೆಯಲ್ಲಿ ಸಾಲ ಸೌಲಭ್ಯ ಪಡೆಯಲು ಇಚ್ಛಿಸುವ ಹಿಂದುಳಿದ ವರ್ಗಗಳ ನಿರುದ್ಯೋಗ ಪದವೀಧರರಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ನಿಗದಿತ ಅರ್ಜಿ ನಮೂನೆಗಳನ್ನು ನಿಗಮದ ಜಿಲ್ಲಾ ವ್ಯವಸ್ಥಾಪಕರ ಕಚೇರಿಯಲ್ಲಿ ಅಥವಾ ಆಯಾ ತಾಲ್ಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ವಿಸ್ತರಣಾಧಿಕಾರಿಗಳ ಕಚೇರಿಯಲ್ಲಿ ಅರ್ಜಿ ಪಡೆದು ಭರ್ತಿಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ಸಲ್ಲಿಸಲು ಕೊನೆಯ ದಿನಾಂಕ: 20-10-2018.

ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**(ಅ) ನಿಗಮದ ಯೋಜನೆಗಳಲ್ಲಿ ಸೌಲಭ್ಯ ಪಡೆಯಲು ಹೊಂದಿರಬೇಕಾದ ಸಾಮಾನ್ಯ ಅರ್ಹತೆಗಳು:**

1. ಈ ಯೋಜನೆಯಲ್ಲಿ ಆರ್ಥಿಕ ಸಹಾಯ ಪಡೆಯಲು ಅಭ್ಯರ್ಥಿಯು ದಿನಾಂಕ: 30-03-2018 ರ ಸಂಖ್ಯೆ: ಸಕಇ 225 ಬಿಸಿಎ 2000 ಆದೇಶದಲ್ಲಿ ಗುರುತಿಸಿದ ಪ್ರವರ್ಗ- 2ಎ, 3ಎ ಮತ್ತು 3ಬಿಗೆ ಸೇರಿದವರಾಗಿರಬೇಕು. (ವಿಶ್ವಕರ್ಮ ಅದರ ಉಪ ಸಮುದಾಯಗಳನ್ನು ಮತ್ತು ಮತೀಯ ಅಲ್ಪಸಂಖ್ಯಾತರನ್ನು ಹೊರತುಪಡಿಸಿ)

2. ಅರ್ಜಿದಾರರ ಕುಟುಂಬ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ರೂ. 40,000/- ಗಳು ಪಟ್ಟಣ ಪ್ರದೇಶದವರಿಗೆ ರೂ. 55,000/- ಗಳ ಒಳಗಿರಬೇಕು.

3. ಅರ್ಜಿದಾರರು ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪದವೀಧರರಾಗಿದ್ದು, ನಿರುದ್ಯೋಗಿಗಳಾಗಿರಬೇಕು.

4. ಅರ್ಜಿದಾರರು ಆಧಾರ್ ಸಂಖ್ಯೆ ಹೊಂದಿರಬೇಕು.

5. ಅರ್ಜಿದಾರರ ಐ.ಎಫ್. ಎಸ್.ಸಿ. ಕೋಡ್ ಹೊಂದಿರುವ ರಾಷ್ಟ್ರೀಕೃತ/ಗ್ರಾಮೀಣ ಬ್ಯಾಂಕ್ ಖಾತೆಗಳನ್ನು ಹೊಂದಿರಬೇಕು.

6. ಅರ್ಜಿದಾರರ ವಯಸ್ಸು ಕನಿಷ್ಠ 25 ರಿಂದ 40 ವರ್ಷಗಳ ಮಿತಿಯಲ್ಲಿರಬೇಕು.

7. ಅರ್ಜಿದಾರರು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.

**<u>(ಆ) ಅಭ್ಯರ್ಥಿಗಳು ಆಯ್ಕೆಯಾದ ನಂತರ ಸಲ್ಲಿಸಬೇಕಾದ ದಾಖಲಾತಿಗಳು:</u>**

1. ಅರ್ಜಿದಾರರು ಕೈಗೊಳ್ಳುವ ಆರ್ಥಿಕ ಚಟುವಟಿಕೆಗಳ ಅನುಭವ/ತರಬೇತಿ ಬಗ್ಗೆ ಪ್ರಮಾಣ ಪತ್ರ/ಸ್ವಯಂ ಘೋಷಣೆ ಹೊಂದಿರಬೇಕು.

2. ಅರ್ಜಿದಾರರು ಸ್ಥಾಪಿಸುವ ಉದ್ಯಮಕ್ಕೆ ಸಂಬಂಧಿಸಿದ ಪ್ರಾಧಿಕಾರದಿಂದ ಅಗತ್ಯ ಲೈಸನ್ಸ್ ಹಾಗೂ ಪರವಾನಗಿ ಹೊಂದಿರಬೇಕು.

3. ಅರ್ಜಿದಾರರು ಉದ್ಯಮ ಸ್ಥಾಪಿಸಲು ಅವಶ್ಯವಿರುವ ಯಂತ್ರೋಪಕರಣಗಳನ್ನು ಕೊಂಡುಕೊಳ್ಳಲು ಸರಬರಾಜುದಾರರಿಂದ ಪಡೆದ Invoice ಮತ್ತು ಯೋಜನಾ ವರದಿ ಒದಗಿಸುವುದು.

4. ಸಾರಿಗೆ ಉದ್ದೇಶಕ್ಕೆ ಸಾಲಬಯಸಿದ್ದಲ್ಲಿ ಅರ್ಜಿದಾರರು ಡ್ರೈವಿಂಗ್ ಲೈಸನ್ಸ್ ಮತ್ತು ಬ್ಯಾಡ್ಜ್ ಹೊಂದಿರಬೇಕು.

5. ಸಾಲದ ಭದ್ರತೆಗೆ ಸಾಲದ ಮೊತ್ತದಷ್ಟು ಮೌಲ್ಯವಿರುವ ಅರ್ಜಿದಾರರು/ಜಾಮೀನುದಾರರ ಸ್ಥಿರಾಸ್ಥಿಯನ್ನು ನಿಗಮದ ಹೆಸರಿಗೆ ಆಧಾರ ಮಾಡಿಕೊಡಬೇಕು (ಸರಳ ನೋಂದಾಯಿತ ಅಡಮಾನ ಪತ್ರದ ಮೂಲಕ) (Simple Registered Mortgage Deed)

ಸಾಲ ಸೌಲಭ್ಯ ಪಡೆಯಲು ಇಚ್ಛಿಸುವ ಹಿಂದುಳಿದ ವರ್ಗದ ನಿರುದ್ಯೋಗ ಪದವೀಧರರು, ಈ ಕಚೇರಿಯಲ್ಲಿ ಅಥವಾ ಆಯಾ ತಾಲ್ಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿಸ್ತರಣಾಧಿಕಾರಿಗಳ ಕಚೇರಿಯಲ್ಲಿ ಉಚಿತ ಅರ್ಜಿಗಳನ್ನು ಪಡೆಯುವುದು. ಅಲ್ಲದೆ ನಿಗಮದ ವೆಬ್‍ಸೈಟ್ www.karnataka.gov.in/dbcdc ಇಲ್ಲಿ ಪಡೆಯಬಹುದಾಗಿರುತ್ತದೆ.

ಭರ್ತಿಮಾಡಿದ ಅರ್ಜಿಗಳನ್ನು ಅಗತ್ಯ/ದಾಖಲಾತಿಗಳೊಂದಿಗೆ ದಿನಾಂಕ: 20-10-2018 ರೊಳಗೆ ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‍ಸೈಟ್ www.karnataka.gov.in/dbcdc ಸಂಪರ್ಕಿಸಬಹುದಾಗಿದೆ.

**ಸಂಖ್ಯೆ:1118/1228**

## ತಾತ್ಕಾಲಿಕ ಕಾನೂನು ಸಲಹೆಗಾರರ ಹುದ್ದೆಗಾಗಿ ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 10, (ಕರ್ನಾಟಕ ವಾರ್ತೆ)

ಕಂದಾಯ ಇಲಾಖೆಯಲ್ಲಿ ಭೂ ಸ್ವಾಧೀನ ಪ್ರಕರಣಗಳಿಗೆ ಸಂಬಂಧಿಸಿದ ವ್ಯಾಜ್ಯಗಳಲ್ಲಿ ಜಿಲ್ಲಾಧಿಕಾರಿಗಳಿಗೆ ಕಾನೂನಿನ ಸಲಹೆ ನೀಡಲು ಸೃಜಿಸಲಾಗಿರುವ ನಿವೃತ್ತ ನ್ಯಾಯಾಧೀಶರ ತಾತ್ಕಾಲಿಕ ಹುದ್ದೆಗಳನ್ನು ಹಾಗೂ ಪೂರಕ ಸಿಬ್ಬಂದಿ ಹುದ್ದೆಗಳನ್ನು ಸರ್ಕಾರವು ಸೃಜಿಸಿದ್ದು, ತಾತ್ಕಾಲಿಕವಾಗಿ ಕಾನೂನು ಸಲಹೆಗಾರ ಹುದ್ದೆಗಾಗಿ (1 ಹುದ್ದೆ) ಅರ್ಜಿಯನ್ನು ಆಹ್ವಾನಿಸಲಾಗಿದೆ.

ಆಸಕ್ತ "ನಿವೃತ್ತ ಜಿಲ್ಲಾ ನ್ಯಾಯಾಧೀಶರು ಅಥವಾ ನಿವೃತ್ತ ಹಿರಿಯ ಸಿವಿಲ್ ನ್ಯಾಯಾಧೀಶರು" ತಮ್ಮ ಸ್ವವಿವರದೊಂದಿಗೆ ನೇರವಾಗಿ ಜಿಲ್ಲಾಧಿಕಾರಿಗಳ ಕಚೇರಿ, ಬೆಂಗಳೂರು ಜಿಲ್ಲೆ, ಬೆಂಗಳೂರು ರವರ ಕಚೇರಿಗೆ ಅಕ್ಟೋಬರ್ 15 ರೊಳಗೆ ಅರ್ಜಿ ಸಲ್ಲಿಸಬಹುದು.

ಸ್ವೀಕೃತವಾಗುವ ಎಲ್ಲಾ ಅರ್ಜಿಗಳನ್ನು ಅರ್ಹತಾ ಆಧಾರದ ಮೇರೆ ಪರಿಶೀಲಿಸಿ ಪರಿಗಣಿಸುವ ಹಕ್ಕು ಜಿಲ್ಲಾಧಿಕಾರಿಗಳ ಕಾರ್ಯಾಲಯಕ್ಕೆ ಕಾಯ್ದಿರಿಸಲಾಗಿರುತ್ತದೆ.

ಈ ಹುದ್ದೆಯು ಸರ್ಕಾರದ ಆದೇಶದಂತೆ ತಾತ್ಕಾಲಿಕವಾಗಿದ್ದು ಒಂದು ವರ್ಷದ ಅವಧಿಗೆ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗುವುದು. ನೇಮಕಾತಿ ಮುಂದುವರೆಸುವ ಹಾಗೂ ರದ್ದುಪಡಿಸುವ ಅಧಿಕಾರ ಜಿಲ್ಲಾಧಿಕಾರಿಗಳಿಗೆ ಇರುತ್ತದೆ.

ಜಿಲ್ಲಾಧಿಕಾರಿಗಳಿಗೆ ವಿವಿಧ ನ್ಯಾಯಾಲಯಗಳ ಪ್ರಕರಣಗಳು ಕಾಲಕಾಲಕ್ಕೆ ಕಾನೂನು ಸಲಹೆ ನೀಡುತ್ತಾ ನೆರವಾಗುವುದು.

ಸರ್ಕಾರವು ಕಾಲಕಾಲಕ್ಕೆ ಹೊರಡಿಸಬಹುದಾದ ಅಧಿಸೂಚನೆ ಮತ್ತು ಆದೇಶಗಳಿಗೆ ಈ ನೇಮಕಾತಿ ಒಳಪಟ್ಟಿರುತ್ತದೆ.

**ಸಂಖ್ಯೆ:1119/1229**

## ಸಚಿವರ ಪ್ರವಾಸ

ಬೆಂಗಳೂರು, ಅಕ್ಟೋಬರ್ 10, (ಕರ್ನಾಟಕ ವಾರ್ತೆ)

ಗಣಿ ಮತ್ತು ಭೂವಿಜ್ಞಾನ ಹಾಗೂ ಮುಜರಾಯಿ ಸಚಿವ ರಾಜಶೇಖರ ಬಿ. ಪಾಟೀಲ ಅವರು ಅಕ್ಟೋಬರ್ 11 ರಿಂದ 14 ರವರೆಗೆ ಬೀದರ್, ಕಲಬುರಗಿ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ಕೇಂದ್ರ ಸ್ಥಾನಕ್ಕೆ ಹಿಂದಿರುಗುವರು ಎಂದು ಪ್ರಕಟಣೆ ತಿಳಿಸಿದೆ.